ಜೂ.16ರಂದು ಫೋನ್ ಇನ್ ಕಾರ್ಯಕ್ರಮ

ಯಾದಗಿರಿ, ಜೂನ್ 14 (ಕರ್ನಾಟಕ ವಾರ್ತೆ): ಕೋವಿಡ್-19 ಹರಡುವಿಕೆಯನ್ನು ನಿಯಂತ್ರಿಸಲು ಕೊರೊನಾ ಸೈನಿಕ (ಕೊರೊನಾ ವಾರಿಯರ್ಸ್) ರಾದ ಆಶಾ ಮತ್ತು ಅಂಗನವಾಡಿ ಶಿಕ್ಷಕರಿಗಾಗಿ ಜಿಲ್ಲಾಧಿಕಾರಿಗಳಾದ ಎಂ.ಕೂರ್ಮಾ ರಾವ್ ಅವರು ಜೂನ್ 16ರಂದು ಬೆಳಿಗ್ಗೆ 9 ರಿಂದ 10 ಗಂಟೆಯವರೆಗೆ ನೇರ ಫೋನ್ ಇನ್ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ನಿಗದಿಪಡಿಸಿದ ದಿನದಂದು ಕೊರೊನಾ ಸೈನಿಕರಾದ ಆಶಾ ಮತ್ತು ಅಂಗನವಾಡಿ ಶಿಕ್ಷಕರು ಫೋನ್ ಇನ್ ಸಂಖ್ಯೆ:9449933946 ಗೆ ಕರೆ ಮಾಡಿ ಕೋವಿಡ್-19 ಹರಡುವಿಕೆಯನ್ನು ನಿಯಂತ್ರಿಸುವ ಕುರಿತು ಏನಾದರೂ ಕುಂದುಕೊರತೆಗಳು ಅಥವಾ ಸಮಸ್ಯೆಗಳಿದ್ದಲ್ಲಿ ಮತ್ತು ಸಲಹೆಗಳನ್ನು ನೀಡುವ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ನೇರವಾಗಿ ಸಂವಾದ ನಡೆಸಲು ಪ್ರಕಟಣೆಯಲ್ಲಿ ಕೋರಲಾಗಿದೆ.